## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿಶ್ವವಿದ್ಯಾಲಯಗಳಲ್ಲಿ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಲು (OBC Cell) ಹಾಗೂ ಸಂಶೋಧನಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಅನುದಾನವನ್ನು ನೀಡುವ ಕುರಿತು.

**ಓದಲಾಗಿದೆ:** 1) 2015-16ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯ ಕಂಡಿಕೆ ಸಂಖ್ಯೆ: 216.
2) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಪತ್ರ ಸಂಖ್ಯೆ: ಹಿಂವಕಇ/ತರಬೇತಿ-2/ವಿಹೀಮಕೋ/ಸಿಆರ್-1/2015-16 ದಿನಾಂಕ: 10/06/2015.

**ಪ್ರಸ್ತಾವನೆ:**

---

2015-16ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿದ ಆಯವ್ಯಯ ಭಾಷಣದ ಕಂಡಿಕೆ-216ರಲ್ಲಿ ಈ ಕೆಳಗಿನಂತೆ ಘೋಷಿಸಲಾಗಿದೆ.

"ವಿಶ್ವವಿದ್ಯಾಲಯಗಳಲ್ಲಿ ಈಗಾಗಲೇ ಸ್ಥಾಪಿಸಿರುವ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಲು OBC Cell ಹಾಗೂ ಹೆಚ್ಚಿನ ಸಂಶೋಧನಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ತಲಾ ರೂ.5 ಲಕ್ಷ ಅನುದಾನ ನೀಡಲಾಗುವುದು. ಇದಕ್ಕಾಗಿ ರೂ.50 ಲಕ್ಷ ಅನುದಾನ ಒದಗಿಸಲಾಗುವುದು."

ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಆಯವ್ಯಯ ಘೋಷಣೆಯನ್ವಯ ವಿಶ್ವವಿದ್ಯಾಲಯಗಳಲ್ಲಿ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸಲು ತಲಾ ರೂ.5.00 ಲಕ್ಷದಂತೆ ಅನುದಾನವನ್ನು ನೀಡುವ ಕುರಿತು ಸರ್ಕಾರದ ಆದೇಶದೊಂದಿಗೆ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 523 ಬಿಎಂಎಸ್ 2015 ಬೆಂಗಳೂರು, ದಿನಾಂಕ:21-07-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕುವೆಂಪು ವಿಶ್ವವಿದ್ಯಾಲಯ ಮತ್ತು ಬೆಂಗಳೂರು ವಿಶ್ವವಿದ್ಯಾಲಯಗಳಲ್ಲಿ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸಲು ತಲಾ ರೂ.5.00 ಲಕ್ಷ(ಐದು ಲಕ್ಷ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಅನುಬಂಧ-1ರಲ್ಲಿನ ಮಾರ್ಗಸೂಚಿಗಳನ್ವಯ ನೀಡಲು ಆದೇಶಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-277-2-37 ರಡಿ ಒದಗಿಸಿರುವ ಅನುದಾನವನ್ನು ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: 659 ವೆಚ್ಚ-3/2015 ದಿನಾಂಕ: 16/07/2015ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹಾಗೂ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014(ಭಾಗ-2), ದಿನಾಂಕ:05/11/2014 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು.(ಆಯುಕ್ತರು, ಹಿಂ.ವ.ಕ. ಮುಖಾಂತರ)
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಪ್ರತಿ ಮಾಹಿತಿಗಾಗಿ:

1) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3) ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು
4) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 523 ಬಿಎಂಎಸ್ 2015 ದಿನಾಂಕ: 21/07/2015ಕ್ಕೆ ಅನುಬಂಧ-1**

ವಿಶ್ವವಿದ್ಯಾಲಯಗಳಲ್ಲಿನ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರು ಮಾಡುವ ಅನುದಾನವನ್ನು ವಿನಿಯೋಗಿಸಲು ಮಾರ್ಗಸೂಚಿಗಳು.

1. <u>ಯೋಜನೆಯ ಉದ್ದೇಶ:</u>

- ಕರ್ನಾಟಕ ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕಲ್ಯಾಣಕ್ಕಾಗಿ ಸ್ಥಾಪಿಸಿರುವ ಹಿಂದುಳಿದ ವರ್ಗಗಳ ಕೋಶವನ್ನು ಬಲಪಡಿಸುವುದು.
- ಹಿಂದುಳಿದ ವರ್ಗಗಳ ಕೋಶದ ಮೂಲಕ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲು ವಿಶ್ವವಿದ್ಯಾಲಯಗಳಿಗೆ ಧನಸಹಾಯವನ್ನು ಒದಗಿಸುವುದು.

2. <u>ಧನ ಸಹಾಯದ ಮೊತ್ತ:</u>

- 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಪ್ರತಿ ವಿಶ್ವವಿದ್ಯಾಲಯಕ್ಕೆ ತಲಾ ರೂ.05.00 ಲಕ್ಷದಂತೆ ಅನುದಾನವನ್ನು ಒದಗಿಸುವುದು.
- ಅನುದಾನ ಲಭ್ಯತೆಗೆ ಅನುಗುಣವಾಗಿ ಮುಂದಿನ ಆರ್ಥಿಕ ವರ್ಷಗಳಲ್ಲಿ ಈ ವಿಶ್ವವಿದ್ಯಾಲಯಗಳೊಂದಿಗೆ ಇತರೆ ಸರ್ಕಾರಿ ವಿಶ್ವವಿದ್ಯಾಲಯಗಳನ್ನು ಧನ ಸಹಾಯಕ್ಕಾಗಿ ಪರಿಗಣಿಸುವುದು.
- ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದಂತೆ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ತರಗತಿಗಳನ್ನು ಆಯೋಜಿಸಿ ಪ್ರತಿ ಗಂಟೆಗೆ ಗರಿಷ್ಠ ರೂ 1,000/-ದಂತೆ ಸಂಭಾವನೆ ಪಾವತಿಸುವುದು.

**ಅಥವಾ**

- ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ತರಗತಿಗಳನ್ನು ತೆಗೆದುಕೊಳ್ಳುವುದು. ಈ ಸಂಪನ್ಮೂಲ ವ್ಯಕ್ತಿಗೆ ಮಾಸಿಕ ಗರಿಷ್ಠ ರೂ 20,000/-ದಂತೆ ಗೌರವ ಧನ ಪಾವತಿಸುವುದು.
- ಧನ ಸಹಾಯದಡಿ ಹಮ್ಮಿಕೊಳ್ಳಲಾದ ಇತರೆ ಮಾಹಿತಿ ಕಾರ್ಯಗಾರಕ್ಕೆ ಪ್ರತಿ ಕಾರ್ಯಗಾರದ ವೆಚ್ಚ ರೂ 25,000/- ಮೀರಕೂಡದು.

3. <u>ಮಂಜೂರಾತಿ ಪ್ರಾಧಿಕಾರ:</u>

ವಿಶ್ವವಿದ್ಯಾಲಯಗಳು ಇರುವ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಇವರು ವಿಶ್ವವಿದ್ಯಾಲಯಗಳಿಗೆ ಧನ ಸಹಾಯವನ್ನು ಮಂಜೂರಾತಿ ಮಾಡುವ ಪ್ರಾಧಿಕಾರವಾಗಿರುತ್ತಾರೆ.

4. <u>ಮಂಜೂರಾತಿ ವಿಧಾನ:</u>

- ಆಯುಕ್ತರ ಕಛೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ನಿಗದಿಪಡಿಸಿರುವ ಅನುದಾನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡುವುದು.
- ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಸ್ವೀಕರ್ತನ ರಶೀದಿಯಲ್ಲಿ ಬಿಲ್‌ಗಳನ್ನು ತಯಾರಿಸಿ, ಮೇಲು ಸಹಿಗಾಗಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವುದು.
- ಜಿಲ್ಲಾ ಖಜಾನೆಗೆ ಬಿಲ್ ಸಲ್ಲಿಸಿ, ವಿಶ್ವವಿದ್ಯಾಲಯಗಳ ಹೆಸರಿಗೆ ಅನುದಾನವನ್ನು ಸೆಳೆದು ಸಂಬಂಧಪಟ್ಟ ವಿಶ್ವವಿದ್ಯಾಲಯಗಳಿಗೆ ನೀಡುವುದು.

5. **ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡಲಾಗುವ ಧನ ಸಹಾಯದಡಿ ಅನುಷ್ಠಾನ ಮಾಡಬೇಕಾದ ಕಾರ್ಯಕ್ರಮಗಳು:**

ವಿಶ್ವವಿದ್ಯಾಲಯಗಳಲ್ಲಿ ಅಧ್ಯಯನ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಈ ಕೆಳಗಿನ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡುವುದು.

- ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮಾಹಿತಿ ಮತ್ತು ಮಾರ್ಗದರ್ಶನ.
- ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣಕ್ಕೆ ಇರುವ ಅವಕಾಶ.
- ವಿವಿಧ ಕ್ಷೇತ್ರಗಳಲ್ಲಿರುವ ಉದ್ಯೋಗವಕಾಶಗಳ ಬಗ್ಗೆ ಮಾಹಿತಿ.
- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ಅನುಷ್ಠಾನ ಮಾಡುವ ಶೈಕ್ಷಣಿಕ ಕಾರ್ಯಕ್ರಮಗಳ ಕುರಿತು ಮಾಹಿತಿ.
- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯೊಂದಿಗೆ ಸಮನ್ವಯೀಕರಣ.
- ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಗ್ರಂಥಾಲಯದ ನಿರ್ವಹಣೆ.
- ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವೃತ್ತಿ ಕೌಶಲ್ಯದ ಉನ್ನತಿಕರಣದ ಬಗ್ಗೆ ಮಾಹಿತಿ.
- ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ದೂರು ನಿವಾರಣೆ.
- ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ವಿಶ್ವವಿದ್ಯಾಲಯವು ಹಮ್ಮಿಕೊಳ್ಳಬಹುದಾದ ಇತರೆ ಕಾರ್ಯಕ್ರಮಗಳು.

6. **ಕಾರ್ಯಕ್ರಮದ ಅನುಷ್ಠಾನ ಮತ್ತು ವರದಿ ಸಲ್ಲಿಕೆ:**

- ಧನ ಸಹಾಯವನ್ನು ಪಡೆಯುವ ವಿಶ್ವವಿದ್ಯಾಲಯಗಳು ಹಿಂದುಳಿದ ವರ್ಗಗಳ ಕೋಶಕ್ಕೆ ಅನುಭವೀ ಪ್ರಾಧ್ಯಾಪಕರನ್ನು ಸಂಯೋಜಕರನ್ನಾಗಿ ನಿಯೋಜಿಸುವುದು.
- ಹಮ್ಮಿಕೊಳ್ಳಬಹುದಾದ ಕಾರ್ಯಕ್ರಮಗಳ ಬಗ್ಗೆ ವಾರ್ಷಿಕ ಕ್ರಿಯಾ ಯೋಜನೆಯನ್ನು ತಯಾರಿಸಿ ಆಯಾ ವಿಶ್ವವಿದ್ಯಾಲಯದ ಮಟ್ಟದಲ್ಲಿ ಅನುಮೋದನೆಯನ್ನು ಪಡೆದುಕೊಳ್ಳುವುದು.
- ಕ್ರಿಯಾ ಯೋಜನೆಯ ಅನುಮೋದನೆಯ ಸಭೆಗೆ ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳನ್ನು ಕಡ್ಡಾಯವಾಗಿ ಆಹ್ವಾನಿಸುವುದು.
- ಕ್ರಿಯಾ ಯೋಜನೆಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ನಿಗದಿತ ಅವಧಿಯೊಳಗೆ ಅನುಷ್ಠಾನ ಮಾಡುವುದು.
- ಮಂಜೂರು ಮಾಡುವ ಧನ ಸಹಾಯದ ಮೊತ್ತವನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳು ಅದೇ ಆರ್ಥಿಕ ವರ್ಷದಲ್ಲಿ ವಿನಿಯೋಗಿಸುವುದು.
- ಅನುದಾನವು ವಿನಿಯೋಗಗೊಂಡ ಬಳಿಕ ಕಾರ್ಯಕ್ರಮದ ಅನುಷ್ಠಾನದ ಬಗ್ಗೆ ವರದಿ, ಧನ ವಿನಿಯೋಗ ಪ್ರಮಾಣ ಪತ್ರ ಹಾಗೂ ಛಾಯಾಚಿತ್ರಗಳನ್ನು ಆಯಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಸಂಬಂಧಪಟ್ಟ ವಿಶ್ವವಿದ್ಯಾಲಯಗಳಿಂದ ಪಡೆದು, ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಮೂಲಕ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಆಯಾ ಆರ್ಥಿಕ ವರ್ಷದ ಮಾರ್ಚ್ 31 ರೊಳಗೆ ಸಲ್ಲಿಸುವುದು.

ಆರ್. ಭಾಸ್ಕರ್

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.